# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 543

ಸದಸ್ಯರ ಹೆಸರು : ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 08.12.2023.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಎಲ್ಲ ವರ್ಗದ ಸಿಬ್ಬಂದಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಬಯೋಮೆಟ್ರಿಕ್ ಸಾಧನಗಳನ್ನು ಅಳವಡಿಸಿಕೊಳ್ಳದ ಪಂಚಾಯಿತಿಗಳು ಯಾವುವು; | ಹೌದು.<br>ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಎಲ್ಲಾ ವರ್ಗದ ಸಿಬ್ಬಂದಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯ ಮಾಡಲಾಗಿದೆ ಮತ್ತು ಬಯೋಮೆಟ್ರಿಕ್ ಸಾಧನಗಳನ್ನು ಅಳವಡಿಸಿಕೊಳ್ಳಲಾಗಿದೆ. |
| (ಆ) | ಗ್ರಾಮ ಪಂಚಾಯಿತಿಗಳಲ್ಲಿ ಸಿಬ್ಬಂದಿಗಳು (ಪಿಡಿಓ, ಪಂಚಾಯಿತಿ ಕಾರ್ಯದರ್ಶಿ ಕಂಪ್ಯೂಟರ್ ಆಪರೇಟರ್, ಬಿಲ್ ಕಲೆಕ್ಟರ್ ಸೇರಿದಂತೆ) ಸಾರ್ವಜನಿಕರಿಗೆ ಸಮಯಕ್ಕೆ ಸರಿಯಾಗಿ ಲಭ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಿಬ್ಬಂದಿಗಳ ಕಡ್ಡಾಯ ಹಾಜರಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br><br>ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಎಲ್ಲಾ ವರ್ಗದ ಸಿಬ್ಬಂದಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯ ಮಾಡಲಾಗಿದೆ. |
| (ಇ) | ಯಾವ ಕಾಲಮಿತಿಯಲ್ಲಿ ಬಯೋಮೆಟ್ರಿಕ್ ಸಾಧನಗಳನ್ನು ಪೂರ್ಣ ಪ್ರಮಾಣದಲ್ಲಿ ಅಳವಡಿಸಲಾಗುವುದು; ಈ ಸಾಧನಗಳ ನಿರ್ವಹಣೆಗಾಗಿ ಸರ್ಕಾರ ನೀಡಿರುವ ಅನುದಾನ ಎಷ್ಟು; ಬಯೋಮೆಟ್ರಿಕ್ ಸಾಧನ ಯಾವ ರೀತಿ ನಿರ್ವಹಣೆ ಮಾಡಲಾಗುತ್ತದೆ; | ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಬಯೋಮೆಟ್ರಿಕ್ ಸಾಧನಗಳನ್ನು ಅಳವಡಿಸಿಕೊಳ್ಳಲಾಗಿದೆ.<br><br>ಬಯೋಮೆಟ್ರಿಕ್ ಸಾಧನಗಳ ನಿರ್ವಹಣೆಗಾಗಿ ಸರ್ಕಾರ ಅನುದಾನ ನೀಡಿರುವುದಿಲ್ಲ. ಬಯೋಮೆಟ್ರಿಕ್ ಸಾಧನ ದುಸ್ಥಿತಿಯಲ್ಲಿದ್ದಾಗ ಗ್ರಾಮ ಪಂಚಾಯಿತಿಯು ಸ್ವಂತ ಸಂಪನ್ಮೂಲದಿಂದ ನಿರ್ವಹಣೆ ಮಾಡಲಾಗುತ್ತದೆ. |

| | | |
|---|---|---|
| (ಈ) | ಗ್ರಾಮ ಪಂಚಾಯಿತಿಯ ಎಲ್ಲಾ ವರ್ಗದ ಸಿಬ್ಬಂದಿಗಳು ಸಾರ್ವಜನಿಕರು ಪಂಚಾಯಿತಿಗೆ ಭೇಟಿ ನೀಡಿದಾಗ ಸಭೆಗಳಿವೆ ಎಂದು ತಪ್ಪು ಹೇಳಿ ತಮ್ಮ ವೈಯಕ್ತಿಕ ಕೆಲಸಗಳಿಗೆ ತೆರಳುವುದರಿಂದ ಮತ್ತು ಕಚೇರಿಗೆ (ಗ್ರಾಮ ಪಂಚಾಯತ್ ಕಾರ್ಯಾಲಯ) ಬಾರದಿರುವುದರಿಂದ ಸಾರ್ವಜನಿಕ ಕೆಲಸ ಕಾರ್ಯಗಳಿಗೆ ಅಡಚಣೆಯುಂಟಾಗುತ್ತಿಲ್ಲವೇ; ಎಲ್ಲಾ ವರ್ಗದ ಸಿಬ್ಬಂದಿಗಳು ಕಚೇರಿ ಸಮಯದಲ್ಲಿ ಹೊರಗಡೆ ಹೋಗುವಾಗ ದಾಖಲಾತಿ ಪುಸ್ತಕದಲ್ಲಿ ಕಾರಣವನ್ನು ನಮೂದು ಮಾಡುವ ವ್ಯವಸ್ಥೆಯನ್ನು ಕಡ್ಡಾಯವಾಗಿ ಜಾರಿಗೆ ತರುವ ಆಲೋಚನೆಯು ಸರ್ಕಾರಕ್ಕಿದೆಯೇ; ಯಾವ ಕಾಲಮಿತಿಯಲ್ಲಿ ಈ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದು; ಈ ಬಗ್ಗೆ ಸರ್ಕಾರದ ನಿಲುವನ್ನು ಸ್ಪಷ್ಟಪಡಿಸುವುದು? | ರಾಜ್ಯದ ಗ್ರಾಮ ಪಂಚಾಯತಿ ಕಛೇರಿಗಳಲ್ಲಿ ಅಧಿಕಾರಿ / ಸಿಬ್ಬಂದಿ ವರ್ಗದವರಿಗಾಗಿ ಚಲನವಲನ ಪುಸ್ತಕವನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು. ಅನ್ಯ ಕಾರ್ಯನಿಮಿತ್ತ ಅಧಿಕಾರಿ / ಸಿಬ್ಬಂದಿ ವರ್ಗದವರು ಕಛೇರಿಯಿಂದ ಹೊರಗುಳಿದಿದ್ದರೆ ಸಮಯವನ್ನು ನಮೂದಿಸಿ, ಕಡ್ಡಾಯವಾಗಿ ದಾಖಲಿಸುವಂತೆ ಈಗಾಗಲೇ ತಿಳಿಸಲಾಗಿದೆ. |

ಸಂಖ್ಯೆ: ಗ್ರಾಅಪ 613 ಗ್ರಾಪಂಅ 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.